## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬಿ.ವಿ.ವಿ. ಸಂಘ ಇವರ ಶ್ರೀ ಬಸವೇಶ್ವರ ಸೈನ್ಸ್ ಕಾಲೇಜು, ಬಾಗಲಕೋಟೆ ಈ ಸಂಸ್ಥೆಯಲ್ಲಿನ ಡಿಪ್ಲೋಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸ್‌ನ ಪ್ರವೇಶಮಿತಿಯನ್ನು ಹೆಚ್ಚಿಸಿ ಸಂಯೋಜನೆ ನೀಡುವ ಕುರಿತು.

**ಓದಲಾಗಿದೆ:**

ವಿಶೇಷಾಧಿಕಾರಿಗಳು, ಕರ್ನಾಟಕ ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ನಿಯಂತ್ರಣ ಪ್ರಾಧಿಕಾರ, ಬೆಂಗಳೂರು ಇವರ ಪತ್ರ ಸಂಖ್ಯೆ: ಪಿಎಂಬಿ/104/2018-19, ದಿನಾಂಕ: 14.06.2019, ಪಿಎಮ್ ಬಿ /155/2019-20.

**ಪ್ರಸ್ತಾವನೆ:**

ಓದಲಾದ ಪತ್ರದಲ್ಲಿ ವಿಶೇಷಾಧಿಕಾರಿಗಳು, ಕರ್ನಾಟಕ ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ನಿಯಂತ್ರಣ ಪ್ರಾಧಿಕಾರ, ಬೆಂಗಳೂರು ಇವರು ಬಿ.ವಿ.ವಿ. ಸಂಘ ಇವರ ಶ್ರೀ ಬಸವೇಶ್ವರ ಸೈನ್ಸ್ ಕಾಲೇಜು, ಬಾಗಲಕೋಟೆ ಈ ಸಂಸ್ಥೆಯಲ್ಲಿನ ಡಿಪ್ಲೋಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸ್‌ನ ಪ್ರವೇಶಮಿತಿಯನ್ನು 2019-20 ನೇ ಸಾಲಿನಿಂದ 20 ರಿಂದ 40 ಸೀಟುಗಳಿಗೆ ಹೆಚ್ಚಿಸುವ ಕುರಿತು ಮಂಜೂರಾತಿ ನೀಡುವಂತೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ಬಿ.ವಿ.ವಿ. ಸಂಘ ಇವರ ಶ್ರೀ ಬಸವೇಶ್ವರ ಸೈನ್ಸ್ ಕಾಲೇಜು, ಬಾಗಲಕೋಟೆ ಈ ಸಂಸ್ಥೆಯಲ್ಲಿನ ಡಿಪ್ಲೋಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸ್‌ನ ಪ್ರವೇಶಮಿತಿಯನ್ನು 2019-20 ನೇ ಸಾಲಿನಿಂದ 20 ರಿಂದ 40 ಸೀಟುಗಳಿಗೆ ಹೆಚ್ಚಿಸಿ ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 159 ಎಂಪಿಎಸ್ 2019 ., ಬೆಂಗಳೂರು, ದಿನಾಂಕ: 09.09.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಬಿ.ವಿ.ವಿ. ಸಂಘ ಇವರ ಶ್ರೀ ಬಸವೇಶ್ವರ ಸೈನ್ಸ್ ಕಾಲೇಜು, ಬಾಗಲಕೋಟೆ ಈ ಸಂಸ್ಥೆಯಲ್ಲಿನ ಡಿಪ್ಲೋಮಾ ಇನ್ ಮೆಡಿಕಲ್ ಲ್ಯಾಬೋರೇಟರಿ ಟೆಕ್ನಾಲಜಿ ಕೋರ್ಸ್‌ನ ಪ್ರವೇಶಮಿತಿಯನ್ನು 2019-20 ನೇ ಸಾಲಿನಿಂದ 20 ರಿಂದ 40 ಸೀಟುಗಳಿಗೆ ಹೆಚ್ಚಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

**ಷರತ್ತುಗಳು**

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/- (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಗಳು ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಅಥವಾ ಈ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ನಿಗದಿಪಡಿಸುವ ದರಗಳಂತೆ ಶುಲ್ಕವನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಂದಾಯ ಮಾಡತಕ್ಕದ್ದು.

. . . . 2